# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನಲ್ಲಿ 3ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-** 1) ಸರ್ಕಾರಿ ಆದೇಶ ಸಂಖ್ಯೆ: ಕೃಇ 04 ಕೃವಿರಾ 2014, ದಿನಾಂಕ: 12-05-2014 ಮತ್ತು 22-08-2014
2) ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರ ದಿನಾಂಕ: 07-10-2014ರ ಪತ್ರ ಸಂಖ್ಯೆ: ಕುಸ/ ಕೃವಿವಿರಾ/2627/2014-15.

**** *** ****

**ಪ್ರಸ್ತಾವನೆ:-**

2014-15ನೇ ಸಾಲಿನ ಆಯವ್ಯಯದಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಲೆಕ್ಕಶೀರ್ಷಿಕೆ 2415-80-004-3-00-101ರಡಿ ಯೋಜನೇತರ ಅನುದಾನ ರೂ. 4103.00 ಲಕ್ಷಗಳನ್ನು ನಿಗದಿಪಡಿಸಿದ್ದು, ಈ ಪೈಕಿ ಮೇಲೆ (1)ರಲ್ಲಿ ಓದಲಾದ ದಿನಾಂಕ 12-05-2014 ಮತ್ತು 22-08-2014ರ ಆದೇಶಗಳಲ್ಲಿ ಯೋಜನೇತರ ವೆಚ್ಚಕ್ಕಾಗಿ (1025.75+1025.75) ರೂ. 2051.50 ಲಕ್ಷಗಳನ್ನು (ರೂ. ಎರಡು ಸಾವಿರದ ಐವತ್ತೊಂದು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಲಾಗಿದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ 07-10-2014ರ ಪತ್ರದೊಂದಿಗೆ ಎರಡನೇ ತ್ರೈಮಾಸಿಕ ಅನುದಾನವಾಗಿ ಬಿಡುಗಡೆ ಮಾಡಲಾದ ಮೊತ್ತಕ್ಕೆ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಒದಗಿಸುತ್ತಾ ಮೂರನೇ ತ್ರೈಮಾಸಿಕ ಕಂತಿನ ಅನುದಾನ ರೂ. 1025.75 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ರಾಯಚೂರು ಇವರು ಕೋರಿರುತ್ತಾರೆ.

3. ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 04 ಕೃವಿರಾ 2014, ಬೆಂಗಳೂರು, ದಿನಾಂಕ: 01-12-2014

4. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ-2415-80-004-3-00-101ರಡಿ ರೂ. 1025.75 ಲಕ್ಷಗಳನ್ನು (ಒಂದು ಸಾವಿರದ ಇಪ್ಪತ್ತೈದು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) 3ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

1) ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.

2) ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
3) ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
4) ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
5) ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.

5. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರು ಸಲ್ಲಿಸುವ ಬಿಲ್ಲಿಗೆ ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು ಇವರು ಮೇಲು ರುಜು ಮಾಡತಕ್ಕದ್ದು.

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 3 ಟಿಎಫ್‌ಪಿ 2014, ದಿನಾಂಕ: 04-04-2014ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಸವರಾಜಯ್ಯ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಸೇವೆಗಳು ಮತ್ತು ಸಮನ್ವಯ)
(ದೂರವಾಣಿ ಸಂಖ್ಯೆ: 080 2203 2344)

ಹೊರಡಿಸಿದೆ
ದಿನಾಂಕ: 3/12/14

**ಇವರಿಗೆ:-**

1. ~~ಮಹಾಲೇಖಪಾಲರು~~, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
7. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.